ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿನ ವಿಶ್ವವಿದ್ಯಾಲಯಗಳ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

80 (935) ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು
ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದಲ್ಲಿರುವ ಖಾಸಗಿ ವಿಶ್ವವಿದ್ಯಾಲಯಗಳು, ಡೀಮ್ಡ್ ಯುನಿವರ್ಸಿಟಿ ಹಾಗೂ ಸ್ವಾಯತ್ತ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು;

(ಆ) ಸದರಿ ವಿಶ್ವವಿದ್ಯಾಲಯಗಳಿಗೆ ಯಾವ ಮಾನದಂಡದ ಆಧಾರದ ಮೇಲೆ ಸ್ಥಾಪನೆಗೆ ಅನುಮತಿ ನೀಡಲಾಗುತ್ತಿದೆ; (ವಿವರ ನೀಡುವುದು)

(ಇ) ಸದರಿ ವಿಶ್ವವಿದ್ಯಾಲಯಗಳಲ್ಲಿ ಸ್ಥಳೀಯರಿಗೆ ಎಷ್ಟು ಉದ್ಯೋಗ ನೀಡಲಾಗಿದೆ;

(ಈ) ಸದರಿ ವಿಶ್ವವಿದ್ಯಾಲಯಗಳಲ್ಲಿ ಕನ್ನಡವನ್ನು ಒಂದು ಭಾಷೆಯಾಗಿ ಕಲಿಸಲಾಗುತ್ತಿದೆಯೇ? (ವಿವರ ನೀಡುವುದು)